ಪ್ರಜಾ ಭಾರತ

ಕನ್ನಡ ದಿನಪತ್ರಿಕೆ

ಸತ್ಯದ ಪರ - ಪ್ರಜೆಗಳ ಧ್ವನಿ..!



‘ಮೊದಲು ಮೋದಿ,ಬಿಜೆಪಿಗೆ ಡೀಸೆಲ್ ದರ ಇಳಿಸೋಕೆ ಹೇಳಿ’: ಬಸ್ ಪ್ರಯಾಣ ದರ ಹೆಚ್ಚಳ ಸಮರ್ಥಿಸಿಕೊಂಡ ಸಿಎಂ ಡಿಕೆ ಶಿವಕುಮಾರ್!

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-64 HASSAN Date : 05.11.2026 THURSDAY Reg No.PRGI No. KNKAN/26/A6168 Page-02 Rs.1.00

ಸಂಪುಟ-01 ಸಂಚಿಕೆ-64 ಹಾಸನ ದಿನಾಂಕ: 05.11.2026 ಗುರುವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ಹೆಗ್ಗಡಿಹಳ್ಳಿ ಬಳಿ ಭೀಮ ಕಾಡಾನೆ ಪ್ರತ್ಯಕ್ಷ; ಗ್ರಾಮಸ್ಥರಲ್ಲಿ ಆತಂಕ

ಪ್ರಜಾ ಭಾರತ ವರದಿ

ಬೇಲೂರು : ತಾಲೂಕಿನ ಅರೇಹಳ್ಳಿ ಹೋಬಳಿಯ ಹೆಗ್ಗಡಿಹಳ್ಳಿ ಗ್ರಾಮದ ಸಮೀಪ ಭೀಮ ಹೆಸರಿನ ಕಾಡಾನೆ ಕಾಣಿಸಿಕೊಂಡಿದ್ದು, ಸುತ್ತಮುತ್ತಲಿನ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ.

ಹಲವು ದಿನಗಳಿಂದ ಸಕಲೇಶಪುರ ತಾಲೂಕಿನಲ್ಲಿ ಸಂಚರಿಸುತ್ತಿದ್ದ ಭೀಮ ಕಾಡಾನೆ, ಮಂಗಳವಾರ ಸಂಜೆ ಲಿಂಗಾಪುರದ ಬಳಿ ಕಾಣಿಸಿಕೊಂಡಿತ್ತು. ಬಳಿಕ ರಾತ್ರಿ ಅರೇಹಳ್ಳಿ-ದೋಲನಮನೆ ರಸ್ತೆಯಲ್ಲಿ ಸಂಚರಿಸಿದ್ದು, ಕಾಡಾನೆಯನ್ನು ಕಂಡ ವಾಹನ ಸವಾರರು ಭಯಭೀತರಾಗಿದ್ದಾರೆ.



ನಂತರ ವೀರಭದ್ರೇಶ್ವರ ಕಾಫಿ ಎಸ್ಟೇಟ್ ಪ್ರವೇಶಿಸಿದ ಕಾಡಾನೆ, ತೋಟದ ವ್ಯಾಪ್ತಿಯಲ್ಲಿ ಸಂಚರಿಸಿದೆ. ಜನವಸತಿ ಪ್ರದೇಶಗಳ ಸಮೀಪವೇ ಕಾಡಾನೆ ಕಾಣಿಸಿಕೊಳ್ಳುತ್ತಿರುವುದರಿಂದ ಸ್ಥಳೀಯರು ಆತಂಕದಲ್ಲಿದ್ದಾರೆ.

ಈ ಭಾಗದಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗುತ್ತಿದ್ದು, ರೈತರು ಹಾಗೂ ಕೂಲಿ ಕಾರ್ಮಿಕರು ಕೃಷಿ ಚಟುವಟಿಕೆಗಳಿಗೆ ತೆರಳಲು ಜೀವಭಯ ಎದುರಿಸುವಂತಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಕಾಡಾನೆಗಳ ಚಲನವಲನದ ಮೇಲೆ ನಿಗಾ ವಹಿಸಿ, ಜನರ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಭೀಮ ಸೇರಿದಂತೆ ಈ ಭಾಗದಲ್ಲಿ ಸಂಚರಿಸುತ್ತಿರುವ ಕಾಡಾನೆಗಳ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಅಪರಿಚಿತ ವಾಹನ ಡಿಕ್ಕಿ: ಅಪರೂಪದ ಚಿರತೆ ಬೆಕ್ಕು ಸಾವು



ಪ್ರಜಾ ಭಾರತ ವರದಿ

ಸಕಲೇಶಪುರ: ಪಟ್ಟಣದ ಬಿ.ಎಂ. ರಸ್ತೆಯ ಪಿಡಬ್ಲ್ಯೂಡಿ ಕಚೇರಿ ಸಮೀಪ ಬುಧವಾರ ಬೆಳಿಗ್ಗೆ ರಸ್ತೆ ದಾಟುತ್ತಿದ್ದ ಅಪರೂಪದ ವನ್ಯಜೀವಿ ಚಿರತೆ ಬೆಕ್ಕು ಅಪರಿಚಿತ ವಾಹನ ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟಿದೆ.

ವೇಗವಾಗಿ ಬಂದ ವಾಹನ ಡಿಕ್ಕಿ ಹೊಡೆದ ಪರಿಣಾಮ ಬೆಕ್ಕು ಸ್ಥಳದಲ್ಲೇ ಸಾವನ್ನಪ್ಪಿದೆ. ಘಟನೆ ಗಮನಿಸಿದ ಸ್ಥಳೀಯರು ತಕ್ಷಣ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ.

ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಅಪರೂಪದ ವನ್ಯಜೀವಿಯೊಂದು ವಾಹನ ಡಿಕ್ಕಿಗೆ ಬಲಿಯಾಗಿರುವ ಘಟನೆ ವನ್ಯಜೀವಿ ಪ್ರಿಯರಲ್ಲಿ ಬೇಸರ ಮೂಡಿಸಿದೆ.

12 ಅಡಿ ಉದ್ದದ ಬೃಹತ್ ಕಾಳಿಂಗ ಸರ್ಪ ಸೆರೆ: ರಕ್ಷಿತಾರಣ್ಯಕ್ಕೆ ಬಿಡುಗಡೆ



ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕಿನ ಹುಲ್ಲಹಳ್ಳಿ ಗ್ರಾಮದಲ್ಲಿ ಮಂಗಳವಾರ ರಾತ್ರಿ ಕಾಣಿಸಿಕೊಂಡ ಸುಮಾರು 12 ಅಡಿ ಉದ್ದದ ಬೃಹತ್ ಕಾಳಿಂಗ ಸರ್ಪವನ್ನು ಉರಗ ತಜ್ಞ ದಸ್ತಗಿರ್ ಹಾಗೂ ತಂಡ ಯಶಸ್ವಿಯಾಗಿ ಸೆರೆಹಿಡಿದು ಸುರಕ್ಷಿತವಾಗಿ ರಕ್ಷಿತಾರಣ್ಯಕ್ಕೆ ಬಿಡುಗಡೆ ಮಾಡಿದೆ.

ಗ್ರಾಮದಲ್ಲಿ ಕಾಳಿಂಗ ಸರ್ಪ ಕಾಣಿಸಿಕೊಂಡ ವಿಷಯ ತಿಳಿದ ಮಲೆನಾಡು ರಕ್ಷಣಾ ಸೇನೆಯ ತಾಲೂಕು ಅಧ್ಯಕ್ಷ ಮಂಜುದೇವ್ ಹುಲ್ಲಹಳ್ಳಿ ಹಾಗೂ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದರು.

ತಕ್ಷಣ ಸ್ಥಳಕ್ಕೆ ಧಾವಿಸಿದ ಉರಗ ತಜ್ಞ ದಸ್ತಗಿರ್ ಹಾಗೂ ತಂಡ ಅರ್ಧ ಗಂಟೆಗೂ ಹೆಚ್ಚು ಕಾಲ ಕಾರ್ಯಾಚರಣೆ ನಡೆಸಿ ಕಾಳಿಂಗ ಸರ್ಪವನ್ನು ಸುರಕ್ಷಿತವಾಗಿ ಸೆರೆಹಿಡಿಯಿತು. ಬಳಿಕ ಅದನ್ನು ರಕ್ಷಿತಾರಣ್ಯಕ್ಕೆ ಬಿಡಲಾಯಿತು.

ರಗ ತಜ್ಞರ ಸಮಯೋಚಿತ ಕಾರ್ಯಾಚರಣೆಯಿಂದ ಸಂಭವಿಸಬಹುದಾಗಿದ್ದ ಅನಾಹುತ ತಪ್ಪಿದ್ದು, ತಂಡದ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಹಾಸನಾಂಬೆ ದರ್ಶನಕ್ಕೆ ಭಕ್ತರ ಮಹಾಪೂರ

ಕ್ಯೂಆರ್ ಕೋಡ್ ನಾಪತ್ತೆ, ಪ್ರೋಟೋಕಾಲ್‌ಗೆ ಮಣೆ

ಪ್ರಜಾ ಭಾರತ ವರದಿ

ಹಾಸನ: ನಗರದ ಅಧಿದೇವತೆ ಶ್ರೀ ಹಾಸನಾಂಬೆ ದೇವಿಯ ದರ್ಶನೋತ್ಸವ ಈ ಬಾರಿ ಭಕ್ತರ ಸಂಖ್ಯೆ ಹಾಗೂ ಆದಾಯ ಸಂಗ್ರಹದಲ್ಲಿ ಹೊಸ ದಾಖಲೆ ನಿರ್ಮಿಸುತ್ತಿದೆ. ಸಾರ್ವಜನಿಕ ದರ್ಶನ ಆರಂಭವಾದ ಆರನೇ ದಿನದ ವೇಳೆಗೆ 12 ಲಕ್ಷಕ್ಕೂ ಅಧಿಕ ಭಕ್ತರು ದೇವಿಯ ದರ್ಶನ ಪಡೆದಿದ್ದು, 300 ಮತ್ತು 1,000 ರೂ. ವಿಶೇಷ ದರ್ಶನದ ಟಿಕೆಟ್ ಹಾಗೂ ಲಾಡು ಪ್ರಸಾದ ಮಾರಾಟದಿಂದ ಬರೋಬ್ಬರಿ 9.70 ಕೋಟಿ ರೂ. ಆದಾಯ ಸಂಗ್ರಹವಾಗಿದೆ. ಆ ದರೆ ಲಕ್ಷಾಂತರ ಭಕ್ತರ ಆಗಮನದ ನಡುವೆಯೇ ದರ್ಶನ ವ್ಯವಸ್ಥೆಯಲ್ಲಿನ ಬದಲಾವಣೆಗಳು, ಡಿಜಿಟಲ್ ಕಾಣಿಕೆ ವ್ಯವಸ್ಥೆಯ ಗೈರುಹಾಜರಿ ಹಾಗೂ ಶಿಷ್ಟಾಚಾರದ ಹೆಸರಿನಲ್ಲಿ ನಡೆಯುತ್ತಿದೆ ಎನ್ನಲಾದ ಪ್ರೋಟೋಕಾಲ್ ದುರುಪಯೋಗದ ಆರೋಪಗಳು ಚರ್ಚೆಗೆ ಗ್ರಾಸವಾಗಿವೆ.

ಬುಧವಾರದಂದು ಹಿಂದಿನ ದಿನಗಳಿಗೆ ಹೋಲಿಸಿದರೆ ಭಕ್ತರ ಜನಸಂದಣಿ ಗಣನೀಯವಾಗಿ ಕಡಿಮೆಯಾಗಿತ್ತು. ಧರ್ಮದರ್ಶನದ ಸರತಿ ಸಾಲಿನಲ್ಲಿ ಸಾಗುತ್ತಿದ್ದ ಭಕ್ತರು ಅರ್ಧ ಗಂಟೆಯೊಳಗೆ ದೇವಿಯ ದರ್ಶನ ಪಡೆಯುವಂತಾಗಿತ್ತು. ಮುಂಜಾನೆ 5 ಗಂಟೆಯಿಂದಲೇ ಸರತಿ ಸಾಲುಗಳು ಬಹುತೇಕ ಖಾಲಿಯಾಗಿದ್ದವು. 300 ಹಾಗೂ 1,000 ರೂ. ವಿಶೇಷ ದರ್ಶನದ ಸಾಲುಗಳಲ್ಲಿಯೂ ಭಕ್ತರ ಸಂಖ್ಯೆ ವಿರಳವಾಗಿತ್ತು. ಸಂತೇಪೇಟೆ ವೃತ್ತದಲ್ಲಿ ಅಳವಡಿಸಿದ್ದ ಬ್ಯಾರಿಕೇಡ್‌ಗಳು ಭಕ್ತರಿಲ್ಲದೆ ಖಾಲಿ ಉಳಿದಿದ್ದರೆ, ಹೊಸಲೈನ್ ರಸ್ತೆ ಬಳಿಯ ಬ್ಯಾರಿಕೇಡ್ ಮೂಲಕ ಭಕ್ತರನ್ನು ದೇವಾಲಯದತ್ತ ಕಳುಹಿಸಲಾಗುತ್ತಿತ್ತು.



ಕಳೆದ ಕೆಲವು ದಿನಗಳಿಂದ ಸಂಜೆ 6 ಗಂಟೆಯ ನಂತರ ಭಕ್ತರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ದರ್ಶನ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿದೆ. ಈ ಹಿಂದೆ ಪ್ರತಿದಿನ ಮುಂಜಾನೆ 3ರಿಂದ 6 ಗಂಟೆಯವರೆಗೆ ನೈವೇದ್ಯದ ನಿಮಿತ್ತ ಗರ್ಭಗುಡಿಯ ಬಾಗಿಲು ಮುಚ್ಚಲಾಗುತ್ತಿತ್ತು. ಆದರೆ ಭಕ್ತರ ಅನುಕೂಲಕ್ಕಾಗಿ ಈ ಅವಧಿಯಲ್ಲಿಯೂ ದರ್ಶನಕ್ಕೆ ಅವಕಾಶ ಕಲ್ಪಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಪ್ರಧಾನ ಅರ್ಚಕ ನಾಗರಾಜ್ ಅವರಿಗೆ ಮನವಿ ಮಾಡಿದ್ದರು.

● ಡಿಜಿಟಲ್ ಕಾಣಿಕೆಗೆ ಕ್ಯೂಆರ್ ಕೋಡ್ ಎಲ್ಲಿ

ಡಿಜಿಟಲ್ ವಹಿವಾಟಿಗೆ ಸರ್ಕಾರವೇ ಹೆಚ್ಚಿನ ಆ ದ್ಯತೆ ನೀಡುತ್ತಿರುವ ಇಂದಿನ ಕಾಲಘಟ್ಟದಲ್ಲಿ ಹಾಸನಾಂಬೆ ದರ್ಶನೋತ್ಸವದಲ್ಲಿ ಕ್ಯೂಆರ್ ಕೋಡ್ ಮೂಲಕ ಕಾಣಿಕೆ ಸಲ್ಲಿಸುವ ವ್ಯವಸ್ಥೆ ಕಾಣಿಸದಿರುವುದು ಪ್ರಶ್ನೆ ಮೂಡಿಸಿದೆ. ಕಳೆದ ವರ್ಷಗಳಲ್ಲಿ ದೇವಾಲಯದ ಪ್ರವೇಶ ದ್ವಾರ, ಸರತಿ ಸಾಲುಗಳು ಹಾಗೂ ಎಲ್‌ಇಡಿ ಪರದೆಗಳ ಸಮೀಪ ಕ್ಯೂಆರ್ ಕೋಡ್ ಬ್ಯಾನರ್‌ಗಳನ್ನು ಅಳವಡಿಸಲಾಗುತ್ತಿತ್ತು. ಆದರೆ ಈ ಬಾರಿ ಅವು ಕಾಣೆಯಾಗಿರುವುದಕ್ಕೆ ಕಾರಣವೇನು ಎಂಬುದನ್ನು ಜಿಲ್ಲಾಡಳಿತ ಸ್ಪಷ್ಟಪಡಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.

● ಪ್ರೋಟೋಕಾಲ್ ಹೆಸರಿನಲ್ಲಿ ಪ್ರಭಾವಿಗಳಿಗೇ ಆದ್ಯತೆ

ಇನ್ನೊಂದೆಡೆ ನಗರದ ಪ್ರವಾಸಿ ಮಂದಿರದಲ್ಲಿ ಕಾಂಗ್ರೆಸ್ ಮುಖಂಡರ ಪ್ರಭಾವ ಹೆಚ್ಚಾಗಿದೆ ಎಂಬ ಆರೋಪವೂ ಕೇಳಿಬಂದಿದೆ. ಪಕ್ಷದ ಮುಖಂಡರು ತಮ್ಮ ಕಾರ್ಯಕರ್ತರು ಹಾಗೂ ಕುಟುಂಬದ ಸದಸ್ಯರನ್ನು ಶಿಷ್ಟಾಚಾರದ ಹೆಸರಿನಲ್ಲಿ ಪ್ರೋಟೋಕಾಲ್ ವ್ಯವಸ್ಥೆಯಡಿ ದೇವಿಯ ದರ್ಶನಕ್ಕೆ ಕಳುಹಿಸುತ್ತಿದ್ದಾರೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದೆ. ನಿಜವಾದ ಶಿಷ್ಟಾಚಾರಕ್ಕೆ ಅರ್ಹರಾದವರಿಗೆ ಮಾತ್ರ ಈ ಸೌಲಭ್ಯ ಕಲ್ಪಿಸಬೇಕು. ಪ್ರೋಟೋಕಾಲ್ ವ್ಯವಸ್ಥೆ ದುರುಪಯೋಗವಾಗದಂತೆ ಹಾಗೂ ಸಾಮಾನ್ಯ ಭಕ್ತರಿಗೆ ಯಾವುದೇ ಅನ್ಯಾಯವಾಗದಂತೆ ಜಿಲ್ಲಾಡಳಿತ ಎಚ್ಚರಿಕೆ ವಹಿಸಬೇಕು ಎಂಬ ಆಗ್ರಹ ವ್ಯಕ್ತವಾಗಿದೆ.

ಈ ನಡುವೆ ಆದಾಯ ಸಂಗ್ರಹದಲ್ಲಿಯೂ ದರ್ಶನೋತ್ಸವ ಗಮನ ಸೆಳೆದಿದೆ. 300 ಮತ್ತು 1,000 ರೂ. ವಿಶೇಷ ದರ್ಶನದ ಟಿಕೆಟ್‌ಗಳು ಹಾಗೂ ಲಾಡು ಪ್ರಸಾದ ಮಾರಾಟದಿಂದ ಈವರೆಗೆ ಒಟ್ಟು 9.70 ಕೋಟಿ ರೂ. ಆದಾಯ ಸಂಗ್ರಹವಾಗಿದೆ ಎಂದು ಆಡಳಿತಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ. ಒಟ್ಟಾರೆ, ಲಕ್ಷಾಂತರ ಭಕ್ತರ ದರ್ಶನ, ಕೋಟ್ಯಂತರ ರೂಪಾಯಿ ಆದಾಯದೊಂದಿಗೆ ಹಾಸನಾಂಬೆ ಜಾತ್ರೆ ಹೊಸ ದಾಖಲೆ ಬರೆಯುತ್ತಿದ್ದರೂ, ಭಕ್ತರ ಅನುಕೂಲ, ಪಾರದರ್ಶಕ ಕಾಣಿಕೆ ವ್ಯವಸ್ಥೆ ಹಾಗೂ ಶಿಷ್ಟಾಚಾರದ ಸಮರ್ಪಕ ಪಾಲನೆ ಕುರಿತು ಜಿಲ್ಲಾಡಳಿತ ಉತ್ತರಿಸಬೇಕಾದ ಪ್ರಶ್ನೆಗಳು ಎದುರಾಗಿವೆ.

ಹಾಲು ಮಾರಾಟ ಕುಸಿತ: ಒಕ್ಕೂಟಕ್ಕೆ ತಿಂಗಳಿಗೆ ರೂ.8.90 ಕೋಟಿ ನಷ್ಟ – ಎಚ್.ಡಿ. ರೇವಣ್ಣ

ಪ್ರಜಾ ಭಾರತ ವರದಿ

ಹಾಸನ: ರಾಜ್ಯದಲ್ಲಿ ಹಾಲಿನ ಉತ್ಪಾದನೆ ಹೆಚ್ಚಾಗುತ್ತಿದ್ದರೂ ಹಾಲು ಮತ್ತು ಮೊಸರಿನ ದರ ಏರಿಕೆಯಿಂದ ಮಾರಾಟ ಪ್ರಮಾಣ ಕುಸಿಯುತ್ತಿದ್ದು, ಹಾಲು ಒಕ್ಕೂಟಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ ಎಂದು ಮಾಜಿ ಸಚಿವ ಹಾಗೂ ಹಾಲು ಒಕ್ಕೂಟದ ಅಧ್ಯಕ್ಷ ಎಚ್.ಡಿ. ರೇವಣ್ಣ ಬೇಸರ ವ್ಯಕ್ತಪಡಿಸಿದರು.



ನಗರದ ಹಾಸನ ಹಾಲು ಒಕ್ಕೂಟದ ಸಭಾಂಗಣದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರತಿದಿನ ಸುಮಾರು 1.10 ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಆದರೆ ಅಕ್ಟೋಬರ್ 30ರ ಮಾಹಿತಿಯಂತೆ ಕೇವಲ ಮೂರು ದಿನಗಳಲ್ಲಿ 2.93 ಲಕ್ಷ ಲೀಟರ್ ಹಾಲು ಹಾಗೂ 1.13 ಲಕ್ಷ ಲೀಟರ್ ಮಸಾಲೆ ಮಜ್ಜಿಗೆ ಮಾರಾಟ ಕಡಿಮೆಯಾಗಿದೆ. ಇದರಿಂದ ಒಕ್ಕೂಟಕ್ಕೆ ಪ್ರತಿ ತಿಂಗಳು ಸುಮಾರು ರೂ.8.90 ಕೋಟಿ ನಷ್ಟವಾಗುತ್ತಿದೆ ಎಂದು ತಿಳಿಸಿದರು.

ಹೆಚ್ಚುವರಿ ಹಾಲನ್ನು ಬೇರೆ ಮಾರುಕಟ್ಟೆಗಳಿಗೆ ಪೂರೈಸುವುದು ಹಾಗೂ ಹಾಲಿನ ಪುಡಿಯಾಗಿ ಸಂಸ್ಕರಿಸಿ ದಾಸ್ತಾನು ಮಾಡುವ ಕ್ರಮ ಕೈಗೊಳ್ಳಲಾಗುತ್ತಿದೆ. ಆದರೂ ಉತ್ಪಾದನೆ ಮತ್ತು ಮಾರಾಟದ ನಡುವಿನ ಅಂತರದಿಂದ ನಿರ್ವಹಣಾ ವೆಚ್ಚ ಹೆಚ್ಚುತ್ತಿದೆ ಎಂದರು.

ಹೊರರಾಜ್ಯದ ಖಾಸಗಿ ಸಂಸ್ಥೆಗಳು ಕಡಿಮೆ ದರದಲ್ಲಿ ಹಾಲಿನ ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವುದರಿಂದ ಪೈಪೋಟಿ ಎದುರಾಗಿದೆ. ರೈತರಿಗೆ ನ್ಯಾಯಯುತ ದರ ನೀಡುವುದರ ಜತೆಗೆ ಗ್ರಾಹಕರಿಗೂ ಕೈಗೆಟುಕುವ ಬೆಲೆಯಲ್ಲಿ ಹಾಲು ಒದಗಿಸುವುದು ಅಗತ್ಯವಾಗಿದೆ. ಹಾಸನ ಹಾಲು ಒಕ್ಕೂಟದ ಉತ್ಪನ್ನಗಳಿಗೆ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳ ಮಾರುಕಟ್ಟೆಯಲ್ಲಿ ಹೆಚ್ಚಿನ ಅವಕಾಶ ಕಲ್ಪಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

ಕೋಲಾರ ಹಾಲು ಒಕ್ಕೂಟಕ್ಕೆ ಸುಮಾರು ರೂ.4 ಕೋಟಿ ಹಾಗೂ ಚಿಕ್ಕಬಳ್ಳಾಪುರ ಒಕ್ಕೂಟಕ್ಕೆ ರೂ.1 ಕೋಟಿ ನಷ್ಟವಾಗಿರುವುದಾಗಿ ತಿಳಿಸಿದ ಅವರು, ಹೈನುಗಾರಿಕೆ ನಂಬಿರುವ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಚ್.ಡಿ.ಸಿ.ಸಿ. ಬ್ಯಾಂಕ್ ಮಾಜಿ ಅಧ್ಯಕ್ಷ ಹೊನ್ನವಳ್ಳಿ ಸತೀಶ್, ಹಾಲು ಒಕ್ಕೂಟದ ಮ್ಯಾನೇಜರ್ ಮಹೇಶ್ ಉಪಸ್ಥಿತರಿದ್ದರು.

ಬೆಲೆ ಏರಿಕೆಗೆ ಶೋಭಾ ಕರಂದ್ಲಾಜೆ ಆಕ್ರೋಶ; ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ

ಬರ ಪರಿಹಾರ ಮೊತ್ತ ಹೆಚ್ಚಿಸಿ, ಹಾಲು ಮತ್ತು ಬಸ್ ಪ್ರಯಾಣ ದರ ಇಳಿಸಲು ಆಗ್ರಹ

ಪ್ರಜಾ ಭಾರತ ವರದಿ

ಹಾಸನ: ರಾಜ್ಯದಲ್ಲಿ ಅಗತ್ಯ ವಸ್ತುಗಳು ಹಾಗೂ ಸೇವೆಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ತೊಂದರೆ ಅನುಭವಿಸುತ್ತಿದ್ದು, ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಸರ್ಕಾರ ತಕ್ಷಣ ಜನರು ಮತ್ತು ರೈತರ ನೆರವಿಗೆ ಧಾವಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದರು.

ನಗರದ ಅಧಿದೇವತೆ ಹಾಸನಾಂಬೆ ದೇವಿಯ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಟುಂಬ ಹಾಗೂ ಭಕ್ತರೊಂದಿಗೆ ತಾಯಿಯ ದರ್ಶನ ಪಡೆದಿರುವುದು ಸಂತಸ ತಂದಿದೆ. ದೇಶದ ರಕ್ಷಣೆ, ಅಭಿವೃದ್ಧಿ ಹಾಗೂ ರೈತರ ಸಂಕಷ್ಟ ದೂರವಾಗಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆ ಕೊರತೆಯಿಂದ ಕೃಷಿ, ತೋಟಗಾರಿಕೆ ಬೆಳೆಗಾರರು ಹಾಗೂ ಕೂಲಿ ಕಾರ್ಮಿಕರು ಸಂಕಷ್ಟ ಎದುರಿಸುತ್ತಿದ್ದಾರೆ. ಬರದಿಂದ ಕೆಲಸವಿಲ್ಲದೆ ಕಾರ್ಮಿಕರು ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೇಂದ್ರದ ತಂಡ ಬರಪೀಡಿತ ಪ್ರದೇಶಗಳ ಪರಿಶೀಲನೆ ನಡೆಸಿ ವರದಿ ಸಿದ್ಧಪಡಿಸುತ್ತಿದ್ದು, ವರದಿಗಾಗಿ ಕಾಯದೆ ರಾಜ್ಯ ಸರ್ಕಾರ ತಕ್ಷಣ ತನ್ನ ಬೊಕ್ಕಸದಿಂದ ರೈತರಿಗೆ ಪರಿಹಾರ ನೀಡಬೇಕು.



ಘೋಷಿಸಿರುವ ರೂ.2,500 ಪರಿಹಾರ ಮೊತ್ತ ಸಾಲದು, ಅದನ್ನು ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ವಿದ್ಯುತ್, ಬಸ್ ಪ್ರಯಾಣ, ಹಾಲು, ಮದ್ಯ ಹಾಗೂ ಮೆಟ್ರೋ ದರಗಳು ಹೆಚ್ಚಳವಾಗಿದ್ದು, ಇದರ ಹೊರೆ ಜನಸಾಮಾನ್ಯರ ಮೇಲೆ ಬೀಳುತ್ತಿದೆ. ಬಸ್ ಪ್ರಯಾಣ ದರ ಇಳಿಸಬೇಕು ಹಾಗೂ ಹೆಚ್ಚಿಸಿರುವ ಹಾಲಿನ ದರವನ್ನು ಕಡಿಮೆ ಮಾಡಬೇಕು ಎಂದರು.

ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡುವ ಹೊಣೆಯನ್ನು ಸರ್ಕಾರವೇ ವಹಿಸಿಕೊಳ್ಳಬೇಕು. ಗ್ರಾಹಕರ ಮೇಲೆ ಬೆಲೆ ಏರಿಕೆಯ ಹೊರೆ ಹಾಕುವ ಬದಲು, ಹಿಂದಿನ ಸರ್ಕಾರದ ಮಾದರಿಯಲ್ಲಿ ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡಬೇಕು ಎಂದು ಶೋಭಾ ಕರಂದ್ಲಾಜೆ ಆಗ್ರಹಿಸಿದರು.

ಟಗರು–ಹೋತಗಳ ಪ್ರದರ್ಶನಕ್ಕೆ ಪ್ರೇಕ್ಷಕರ ಮೆಚ್ಚುಗೆ

ದೇಶಿ ತಳಿಗಳ ಸಂರಕ್ಷಣೆಯಲ್ಲಿ ರೈತರ ಪಾತ್ರ ಮಹತ್ವದ್ದು: ಸಚಿವ ಶಿವಲಿಂಗೇಗೌಡ

ಪ್ರಜಾ ಭಾರತ ವರದಿ

ಹಾಸನ: ದೇಶಿ ಹಾಗೂ ವಿದೇಶಿ ತಳಿಗಳ ಟಗರು ಮತ್ತು ಹೋತಗಳನ್ನು ಸಾಕಿ, ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವಲ್ಲಿ ರೈತರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ಎಂ. ಶಿವಲಿಂಗೇಗೌಡ ತಿಳಿಸಿದರು.

ಹಾಸನಾಂಬೆ ದೇವಿ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತದಿಂದ ಮಹಾನಗರ ಪಾಲಿಕೆ ಆವರಣದಲ್ಲಿ ಆಯೋಜಿಸಿದ್ದ ಟಗರು ಮತ್ತು ಹೋತಗಳ ಪ್ರದರ್ಶನ ವೀಕ್ಷಿಸಿ ಅವರು ಮಾತನಾಡಿದರು.

ವಿವಿಧ ಭಾಗಗಳಿಂದ ಆಗಮಿಸಿದ್ದ ಉತ್ತಮ ತಳಿಯ ಕುರಿ ಮತ್ತು ಮೇಕೆಗಳು ಪ್ರದರ್ಶನದಲ್ಲಿ ಭಾಗವಹಿಸಿದ್ದು, ಅವುಗಳ ಆಕರ್ಷಕ ಮೈಕಟ್ಟು ಹಾಗೂ ವಿಶೇಷ ತಳಿ ಗುಣಲಕ್ಷಣಗಳು ಪ್ರೇಕ್ಷಕರ ಗಮನ ಸೆಳೆದವು. ಪ್ರತಿ ತಳಿಯಲ್ಲೂ ವಯಸ್ಸಿಗೆ ಅನುಗುಣವಾಗಿ ಎರಡು ವಿಭಾಗಗಳನ್ನು ಮಾಡಿ, ಉತ್ತಮ ಟಗರು ಮತ್ತು ಹೋತಗಳನ್ನು ಆಯ್ಕೆ ಮಾಡಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ನೀಡಲಾಯಿತು.

ಪ್ರದರ್ಶನದಲ್ಲಿ ಭಾಗವಹಿಸಿದ್ದ ಎಲ್ಲಾ ಟಗರು ಮತ್ತು ಹೋತಗಳ ಮಾಲೀಕರಿಗೆ ಸಚಿವರು ತಲಾ ರೂ.2,000 ಪ್ರೋತ್ಸಾಹಧನ ನೀಡಿ ಗೌರವಿಸಿದರು. ವಿಜೇತರಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರ ವಿತರಿಸಲಾಯಿತು.



ದೇಶಿ ತಳಿಗಳ ಸಂರಕ್ಷಣೆ, ಅಭಿವೃದ್ಧಿ ಹಾಗೂ ಕುರಿ-ಮೇಕೆ ಸಾಕಾಣಿಕೆಯ ಮಹತ್ವವನ್ನು ರೈತರು ಮತ್ತು ಸಾರ್ವಜನಿಕರಿಗೆ ಪರಿಚಯಿಸುವ ಉದ್ದೇಶದಿಂದ ಪ್ರದರ್ಶನ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಎಲ್. ಹನುಮೇಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಹಾಸನಾಂಬೆ ದರ್ಶನ ಪಡೆದ ಡಿ.ಕೆ. ಶಿವಕುಮಾರ್ ಪುತ್ರ ಆಕಾಶ್

ಗರ್ಭಗುಡಿಯಲ್ಲಿ ಕುಳಿತು ವಿಶೇಷ ಪ್ರಾರ್ಥನೆ; ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡದೆ ನಿರ್ಗಮನ

ಪ್ರಜಾ ಭಾರತ ವರದಿ

ಹಾಸನ: ನಗರದ ಅಧಿದೇವತೆ ಶ್ರೀ ಹಾಸನಾಂಬೆ ದೇವಿಯ ದರ್ಶನಕ್ಕೆ ಗಣ್ಯರ ಭೇಟಿ ಮುಂದುವರಿದಿದ್ದು, ಬುಧವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪುತ್ರ ಆಕಾಶ್ ಶಿವಕುಮಾರ್ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ದೇವಿಯ ಗರ್ಭಗುಡಿಯೊಳಗೆ ಕೆಲಕಾಲ ಕುಳಿತು ಭಕ್ತಿಭಾವದಿಂದ ಪ್ರಾರ್ಥನೆ ಸಲ್ಲಿಸಿದ ಅವರು, ಬಳಿಕ ದರ್ಬಾರ್ ಗಣಪತಿ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮಿ ದೇವಾಲಯಗಳಿಗೂ ಭೇಟಿ ನೀಡಿ ದರ್ಶನ ಪಡೆದರು.

ಈ ವೇಳೆ ಮಾಧ್ಯಮ ಪ್ರತಿನಿಧಿಗಳು ಅವರ ಪ್ರತಿಕ್ರಿಯೆ ಪಡೆಯಲು ಮುಂದಾದರೂ, ಯಾವುದೇ ಹೇಳಿಕೆ ನೀಡದೆ ಕ್ಯಾಮೆರಾಗಳಿಗೆ ಮುಖ ತೋರಿಸದೆ ಮೌನವಾಗಿ ನಿರ್ಗಮಿಸಿದರು. ಅವರ ಭೇಟಿಯ ಉದ್ದೇಶದ ಬಗ್ಗೆ ಯಾವುದೇ ಮಾಹಿತಿ ಬಹಿರಂಗಪಡಿಸಲಿಲ್ಲ.



ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಎಂ. ಪಟೇಲ್, ಶ್ರೀರಂಗಪಟ್ಟಣ ಶಾಸಕ ಬಂಡಿಸಿದ್ದೇಗೌಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕರ್ನಾಟಕದಲ್ಲಿ ಬಸ್ ದರ ಏರಿಕೆ; ‘ಲಾಭ ಗಳಿಸಲು ಅಲ್ಲ

ರಾಜ್ಯದಲ್ಲಿ ಬಸ್ ಪ್ರಯಾಣ ದರ ಏರಿಕೆ ಮಾಡಲಾಗಿದೆ. ಈ ಬಗ್ಗೆ ಸಾರಿಗೆ ಸಚಿವ ಬೈರತಿ ಸುರೇಶ್ ಮಾಹಿತಿ ನೀಡಿದ್ದಾರೆ. ಕೆ ಎಸ್ ಆರ್ ಟಿಸಿಯಲ್ಲಿ ಗರಿಷ್ಠ 9 ರೂಪಾಯಿ ಏರಿಕೆ ಮಾಡಲಾಗಿದೆ. ರಾಜ್ಯ ಸರ್ಕಾರದ ಸಾರಿಗೆ ಇಲಾಖೆಯ ನಾಲ್ಕು ನಿಗಮಗಳು ಪ್ರತಿವರ್ಷ 2000 ಕೋಟಿ ನಷ್ಟದಲ್ಲಿ ಇವೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಮಾಹಿತಿ ನೀಡಿದರು. ರಾಜ್ಯದ ಸಾರಿಗೆ ಇಲಾಖೆಯ ನಾಲ್ಕು ನಿಗಮಗಳಲ್ಲಿ 1,03,600 ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ. ಪ್ರತನಿತ್ಯ 1,24,79,000 ಪ್ರಯಾಣಿಕರು ಸಾರಿಗೆ ಇಲಾಖೆಯ ಬಸ್‌ಗಳಲ್ಲಿ ಪ್ರಯಾಣ ಮಾಡುತ್ತಿದ್ದಾರೆ ಎಂದು ಸಾರಿಗೆ ಇಲಾಖೆ ಸಚಿವ ಬೈರತಿ ಸುರೇಶ್ ಅವರು ವಿವರಿಸಿದರು

ರಾಜಕೀಯವಾಗಿ ಸಿದ್ದರಾಮಯ್ಯ ಮುಗಿಸಲು ಸ್ಟಿಂಗ್



ಪ್ರಜಾ ಭಾರತ ವರದಿ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ‘ಸ್ಟಿಂಗ್ ಆಪರೇಷನ್’ ಪ್ರಕರಣಕ್ಕೆ ಸಂಬಂಧಿಸಿದಂತೆ, ಕೃಪಾ ಆಳ್ವಾ ಅವರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷೆಯಾಗಿದ್ದಾಗ ಆಯೋಗಕ್ಕೆ ಕಳುಹಿಸಿದ್ದ ಇ-ಮೇಲ್ ಎಲ್ಲಿ ಹೋಯಿತು? ಅದನ್ನು ಇಟ್ಟುಕೊಂಡಿದ್ದೀರಾ? ಅಥವಾ ಅಳಿಸಿ ಹಾಕಿದ್ದೀರಾ?’ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ, ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಗೃಹ ಸಚಿವ ಪ್ರಿಯಾಂಕ್ ಖರ್ಗೆಗೆ ಪ್ರಶ್ನಿಸಿದ್ದಾರೆ.

ಇ-ಮೇಲ್ ನನ್ನ ವ್ಯಾಪ್ತಿಗೆ ಬರಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ, ಯಾಕೆ ಪ್ರಿಯಾಂಕ್ ಖರ್ಗೆ ವ್ಯಾಪ್ತಿಗೆ ಆಮೇಲ್ ಬರಲ್ಲ. ಗೃಹ ಇಲಾಖೆ ನನ್ನ ಕೈಯಲ್ಲಿ ಇದ್ಯಾ? ನಿಮಗೆ ಅದನ್ನ ಕಂಡು ಹಿಡಿಯಲು ಯೋಗ್ಯತೆ ಇಲ್ಲದಿದ್ರೆ ನೀವು ಇರೋದು ಯಾಕೆ? ಅನ್‌ಫಿಟ್ ಎಂದು ಪ್ರಿಯಾಂಕ್ ಖರ್ಗೆ ವಿರುದ್ಧ ಕುಮಾರಸ್ವಾಮಿ ಗುಡುಗಿದ್ರು.

ಪ್ರಜಾ ಭಾರತ
ಶುಭ ನುಡಿ

ಯಾರು ಏನೇ ಯೋಜನೆ ರೂಪಿಸಿಕೊಂಡಿದ್ದರೂ ಅಂತಿಮ ನಿರ್ಧಾರ ಮಾತ್ರ ಪರಮಾತ್ಮನದ್ದೇ..!!

ಗೃಹಲಕ್ಷ್ಮಿಯ ರೂ2,660 ಕೋಟಿ ಅನುದಾನ ವರ್ಗಾವಣೆ ಆರ್ಥಿಕ ಮುಗ್ಗಟ್ಟಿನಲ್ಲಿ ಸರ್ಕಾರ ಎಂದ ನಿಖಿಲ್ ಕುಮಾರಸ್ವಾಮಿ

ರಾಜ್ಯದ ಬೊಕ್ಕಸದ ಪರಿಸ್ಥಿತಿ ಏನಾಗಿದೆ? ಗ್ಯಾರಂಟಿ ಯೋಜನೆಗಳಿಗೆ ಹಣದ ಕೊರತೆ ಏಕೆ ಎದುರಾಗಿದೆ? ಆರ್ಥಿಕ ಮುಗ್ಗಟ್ಟಿನ ಬಗ್ಗೆ ಸರ್ಕಾರವೇ ಹೇಳಿಕೊಂಡಿರುವಾಗ ರಾಜ್ಯದ ಹಣಕಾಸು ಸ್ಥಿತಿಯನ್ನು ಜನರ ಮುಂದಿಡಬೇಕು ಎಂದು ಆಗ್ರಹಿಸಿದರು.

ಕಾಡಾನೆ ಹಾವಳಿ ತಡೆಗೆ ಶಾಶ್ವತ ಪರಿಹಾರಕ್ಕೆ ಆಗ್ರಹ

ಬಿಕ್ಕೋಡು ಸಭೆಯಲ್ಲಿ ರೈತರು, ಕಾಫಿ ಬೆಳೆಗಾರರು ಹಾಗೂ ಸಂಘಟನೆಗಳ ಮುಖಂಡರ ನಿರ್ಧಾರ

ಪ್ರಜಾ ಭಾರತ ವರದಿ

ಬೇಲೂರು: ತಾಲೂಕಿನಲ್ಲಿ ಹೆಚ್ಚುತ್ತಿರುವ ಕಾಡಾನೆಗಳ ಹಾವಳಿ ನಿಯಂತ್ರಿಸಿ ಬೆಳೆ ನಾಶ ಹಾಗೂ ಪ್ರಾಣಹಾನಿ ತಡೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಆಗ್ರಹಿಸಿ ನ.16ರಿಂದ ಬೇಲೂರು ತಾಲೂಕು ಕೇಂದ್ರದಲ್ಲಿ ಅನಿರ್ದಿಷ್ಟಾವಧಿ ಧರಣಿ ನಡೆಸಲು ರೈತರು, ಕಾಫಿ ಬೆಳೆಗಾರರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ನಿರ್ಧರಿಸಿದ್ದಾರೆ.



ಈ ಕುರಿತು ಬಿಕ್ಕೋಡಿನ ಕಲ್ಯಾಣ ಮಂಟಪದಲ್ಲಿ ನಡೆದ ಸಭೆಯಲ್ಲಿ ನೂರಾರು ರೈತರು ಹಾಗೂ ಮುಖಂಡರು ಭಾಗವಹಿಸಿ ಹೋರಾಟದ ರೂಪುರೇಷೆ ಸಿದ್ಧಪಡಿಸಿದರು.

ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಳ್ಳೂರು ಸ್ವಾಮಿಗೌಡ ಮಾತನಾಡಿ, ಹಲವು ಬಾರಿ ಹೋರಾಟ ನಡೆಸಿದರೂ ಶಾಶ್ವತ ಪರಿಹಾರ ದೊರೆತಿಲ್ಲ. ಈ ಬಾರಿ ಸಂಬಂಧಪಟ್ಟ ಸಚಿವರು ಹಾಗೂ ಹಿರಿಯ ಅಧಿಕಾ-ರಿಗಳು ಸ್ಥಳಕ್ಕೆ ಆಗಮಿಸಿ ಸೂಕ್ತ ಕ್ರಮ ಕೈಗೊಳ್ಳುವವರೆಗೂ ಹಗಲು-ರಾತ್ರಿ ಧರಣಿ ಮುಂದುವರಿಸಬೇಕು ಎಂದರು.

ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಎಸ್.ಎಂ. ರಾಜು ಮಾತನಾಡಿ, ರೈತರು, ಬೆಳೆಗಾರರು ಹಾಗೂ ಕಾರ್ಮಿಕರು ಒಗ್ಗಟ್ಟಿನಿಂದ ಹೋರಾಟ ನಡೆಸಿ ಸರ್ಕಾರದ ಗಮನ ಸೆಳೆಯಬೇಕು ಎಂದು ಕರೆ ನೀಡಿದರು.

ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ಸಿದ್ದೇಗೌಡ ಹಾಗೂ ಮಾಜಿ ಅಧ್ಯಕ್ಷ ಅದ್ದೂರಿ ಕುಮಾರ್ ಮಾತನಾಡಿ, ಹಿಂದಿನ ಹೋರಾಟಗಳ ಬಳಿಕವೂ ಸಮಸ್ಯೆ ಬಗೆಹರಿದಿಲ್ಲ. ಈ ಬಾರಿ ಕೇವಲ ಭರವಸೆಗಳಿಗೆ ಮಣಿಯದೆ ಶಾಶ್ವತ ಪರಿಹಾರ ದೊರೆಯುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದರು.

ಸಭೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಭೋಗ ಮಲ್ಲೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಮಿತ್ ಶೆಟ್ಟಿ, ಗೆಂಡೇಹಳ್ಳಿ ಶ್ರೀನಿವಾಸ್ ಸೇರಿದಂತೆ ರೈತರು, ಕಾಫಿ ಬೆಳೆಗಾರರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದು ಹೋರಾಟಕ್ಕೆ ಬೆಂಬಲ ಸೂಚಿಸಿದರು.

ರಾಷ್ಟ್ರೀಯ ಹೆದ್ದಾರಿ 234ರಲ್ಲಿ ಭೀಕರ ಅಪಘಾತ: ಟಿಪ್ಪರ್ ಹರಿದು ಮಹಿಳೆ ಸ್ಥಳದಲ್ಲೇ ಸಾವು

ಪ್ರಜಾ ಭಾರತ ವರದಿ

ಅರಸೀಕೆರೆ: ತಾಲೂಕಿನ ಕಲ್ಲುಸಾದರಹಳ್ಳಿ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿ 234ರಲ್ಲಿ ಜಲ್ಲಿ ಸಾಗಿಸುತ್ತಿದ್ದ ಟಿಪ್ಪರ್ ಲಾರಿ ಹರಿದ ಪರಿಣಾಮ ಮಹಿಳೆಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.



ಟಿಪ್ಪರ್ ಲಾರಿ ಮಹಿಳೆಯ ಮೇಲೆ ಹರಿದ ಪರಿಣಾಮ ದೇಹ ಛಿದ್ರಛಿದ್ರವಾಗಿದ್ದು, ಅಪಘಾತದ ಭೀಕರ ದೃಶ್ಯ ಕಂಡ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ಘಟನೆಯಿಂದ ಕೆಲಕಾಲ ಹೆದ್ದಾ-ರಿಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಅಪಘಾತಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ. ಮೃತ ಮಹಿಳೆಯ ಗುರುತು ಪತ್ತೆ ಹಾಗೂ ಘಟನೆಯ ಕುರಿತು ಪೊಲೀಸ್ ಇಲಾಖೆಯಿಂದ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ

ಹೆದ್ದಾರಿಯಲ್ಲಿ ಭಾರೀ ವಾಹನಗಳ ಸಂಚಾರ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಚಾಲಕರು ಎಚ್ಚರಿಕೆ ವಹಿಸಬೇಕು ಹಾಗೂ ಪಾದಚಾರಿಗಳ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಹಾಸನಾಂಬೆ ದರ್ಶನದಿಂದ ದೀಪಾವಳಿ ಆಚರಣೆಗೆ ಹೊಸ ಶಕ್ತಿ: ತಾರಾ

ಪ್ರಜಾ ಭಾರತ ವರದಿ

ಹಾಸನ: ಹಾಸನಾಂಬೆ ತಾಯಿಯ ದರ್ಶನ ಪಡೆದು ಆಶೀರ್ವಾದ ಪಡೆದ ಬಳಿಕ ದೀಪಾವಳಿ ಹಬ್ಬ ಆಚರಿಸುವುದು ಮನಸ್ಸಿಗೆ ನೆಮ್ಮದಿ, ಹೊಸ ಶಕ್ತಿ ಹಾಗೂ ಉತ್ಸಾಹ ನೀಡುತ್ತದೆ ಎಂದು ಚಲನಚಿತ್ರ ನಟಿ ತಾರಾ ಹೇಳಿದರು.



ನಗರದ ಶ್ರೀ ಹಾಸನಾಂಬೆ ದೇವಾಲಯಕ್ಕೆ ಬುಧವಾರ ಭೇಟಿ ನೀಡಿ ದೇವಿಯ ದರ್ಶನ ಪಡೆದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರತಿವರ್ಷವೂ ತಾಯಿಯ ದರ್ಶನ ಪಡೆಯುವುದು ವಿಶೇಷ ಸಂತೋಷ ನೀಡುತ್ತದೆ. ದೇವಿಯಲ್ಲಿ ಯಾವುದೇ ವಿಶೇಷ ಬೇಡಿಕೆ ಇಡುವುದಿಲ್ಲ. ಎಲ್ಲವೂ ತಾಯಿಗೆ ತಿಳಿದಿದ್ದು, ಎಲ್ಲರಿಗೂ ಒಳ್ಳೆಯದಾಗಲಿ ಎಂದು ಪ್ರಾರ್ಥಿಸುತ್ತೇನೆ ಎಂದರು.

ಕನ್ನಡ ಚಿತ್ರರಂಗದ ಬೆಳವಣಿಗೆ ಕು-ರಿತು ಮಾತನಾಡಿದ ಅವರು, ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (ಎಐ) ಬಳಕೆಯಿಂದ ಸಿನಿಮಾ ನಿರ್ಮಾಣದಲ್ಲಿ ಸಾಕಷ್ಟು ಬದಲಾವಣೆಗಳಾಗುತ್ತಿವೆ. ತಂತ್ರಜ್ಞಾನದ ಬೆಳವಣಿಗೆಯಿಂದ ಕಲಾವಿದರ ಅಗತ್ಯ ಕಡಿಮೆಯಾಗಬಹುದೇ ಎಂಬ ಆತಂಕವೂ ಇದೆ. ಆದರೂ ಉತ್ತಮ ಕಥೆ ಮತ್ತು ಗುಣಮಟ್ಟದ ಸಿನಿಮಾಗಳಿಗೆ ಪ್ರೇಕ್ಷಕರು ಸದಾ ಬೆಂಬಲ ನೀಡುತ್ತಾರೆ ಎಂಬ ವಿಶ್ವಾಸವಿದೆ ಎಂದು ತಿಳಿಸಿದರು.

ಇತ್ತೀಚಿನ ಪ್ರೇಮದ ಊರಲ್ಲಿ ಕನ್ನಡ ಚಿತ್ರ ಉತ್ತಮವಾಗಿದ್ದು, ಒಳ್ಳೆಯ ಸಿನಿಮಾಗಳನ್ನು ಪ್ರೇಕ್ಷಕರು ಖಂಡಿತ ಚಿತ್ರಮಂದಿರಗಳಲ್ಲಿ ವೀಕ್ಷಿಸುತ್ತಾರೆ. ಅದರಲ್ಲೂ ಕುಟುಂಬ ಮೌಲ್ಯಗಳನ್ನು ಒಳಗೊಂಡ ಸಿನಿಮಾಗಳು ಎಂದಿಗೂ ಪ್ರೇಕ್ಷಕರ ಮೆಚ್ಚುಗೆ ಗಳಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಇದೇ ವೇಳೆ ತಮ್ಮ ಮುಂದಿನ ಚಿತ್ರದ ಕುರಿತು ಮಾತನಾಡಿದ ಅವರು, ಚಿಕ್ಕಣ್ಣ ನಾಯಕನಾಗಿ ನಟಿಸಿರುವ ಹಾಗೂ ಎ.ಪಿ. ಅರ್ಜುನ್ ನಿರ್ಮಾಣದ ಲಕ್ಷ್ಮೀಪುತ್ರ ಸಿನಿಮಾ ಇದೇ 21ರಂದು ಬಿಡುಗಡೆಯಾಗಲಿದೆ. ಚಿತ್ರದಲ್ಲಿ ತಾವು ಲಕ್ಷ್ಮೀ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಪ್ರೇಕ್ಷಕರು ಚಿತ್ರಮಂದಿರಗಳಿಗೆ ಆಗಮಿಸಿ ಚಿತ್ರವನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಅರಸೀಕೆರೆಯಲ್ಲಿ ಮತ್ತೆ ಕಳ್ಳರ ಕೈಚಳಕ

66 ಗ್ರಾಂ ಚಿನ್ನ, ರೂ.2.50 ಲಕ್ಷ ನಗದು ಕಳವು

ಪ್ರಜಾ ಭಾರತ ವರದಿ

ಅರಸೀಕೆರೆ, ನ.4: ನಗರದ ಸುನ್ನಿ ಚೌಕ್ 1ನೇ ಕ್ರಾಸ್‌ನಲ್ಲಿ ಮನೆಯಲ್ಲೇ ಕುಟುಂಬಸ್ಥರು ಮಲಗಿದ್ದ ವೇಳೆ ಮನೆಗೆ ನುಗ್ಗಿದ ಕಳ್ಳರು 66 ಗ್ರಾಂ ಚಿನ್ನಾಭರಣ ಹಾಗೂ ರೂ.2.50 ಲಕ್ಷ ನಗದು ದೋಚಿಕೊಂಡು ಪರಾರಿಯಾಗಿರುವ ಘಟನೆ ನ.3ರ ರಾತ್ರಿ ನಡೆದಿದೆ.

ಸುನ್ನಿ ಚೌಕ್ ನಿವಾಸಿಗಳಾದ ಸನಾವುಲ್ಲಾ ಶರೀಫ್ ಹಾಗೂ ಡಾ. ಆಯಿಷಾ ತರನ್ನುಮ್ ಅವರ ಮನೆಯಲ್ಲಿ ರಾತ್ರಿ 2ರಿಂದ ಬೆಳಗಿನ ಜಾವ 4 ಗಂಟೆಯ ನಡುವೆ ಕಳ್ಳತನ ನಡೆದಿದೆ.



ಮನೆಯೊಳಗೆ ನುಗ್ಗಿದ ಕಳ್ಳರು ಕುಟುಂಬಸ್ಥರು ಮಲಗಿದ್ದ ಕೊಠಡಿಗಳಿಗೆ ಹೊರಗಿನಿಂದ ಬೀಗ ಹಾಕಿ, ಚಿನ್ನಾಭರಣ ಹಾಗೂ ನಗದನ್ನು ದೋಚಿದ್ದಾರೆ ಎನ್ನಲಾಗಿದೆ.

ನಂತರ ಮನೆಯ ಕಾಂಪೌಂಡ್ ಗೋಡೆ ಹಾರಿ ಪರಾರಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಈ ವೇಳೆ ಕಳ್ಳರ ಚಪ್ಪಲಿಯೊಂದು ಸ್ಥಳದಲ್ಲಿ ಬಿದ್ದಿದೆ. ಅದನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಮಾಹಿತಿ ತಿಳಿದ ಅರಸೀಕೆರೆ ನಗರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ನಗರದಲ್ಲಿ ಪದೇಪದೇ ಮನೆ ಕಳ್ಳತನ ಪ್ರಕರಣಗಳು ನಡೆಯುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಮನೆಯೊಳಗೆ ಕುಟುಂಬಸ್ಥರು ಇದ್ದರೂ ಕಳ್ಳರು ನಿರ್ಭೀತಿಯಿಂದ ಕೃತ್ಯ ಎಸಗಿರುವುದು ಆತಂಕಕಾರಿ ಸಂಗತಿಯಾಗಿದೆ. ರಾತ್ರಿ ಪೊಲೀಸ್ ಗಸ್ತು ಹೆಚ್ಚಿಸಿ ಕಳ್ಳತನ ಪ್ರಕರಣಗಳಿಗೆ ಕಡಿವಾಣ ಹಾಕಬೇಕು ಹಾಗೂ ಆರೋಪಿಗಳನ್ನು ಶೀಘ್ರ ಬಂಧಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಮಾಧ್ಯಮ ಕ್ಷೇತ್ರದ ಸೇವೆಗೆ ಐ.ಕೆ. ಮಂಜುನಾಥ್‌ಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ

ಪ್ರಜಾ ಭಾರತ ವರದಿ

ಚನ್ನರಾಯಪಟ್ಟಣ: ಪತ್ರಿಕಾ ಹಾಗೂ ದೃಶ್ಯ ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಸುದೀರ್ಘ ಸೇವೆಯನ್ನು ಗುರುತಿಸಿ ಪತ್ರಕರ್ತ ಐ.ಕೆ. ಮಂಜುನಾಥ್ ಅವರಿಗೆ ತಾಲೂಕು ಆಡಳಿತದ ವತಿಯಿಂದ ತಾಲೂಕು ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಕಳೆದ 12 ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ಸಕ್ರಿಯರಾಗಿರುವ ಮಂಜುನಾಥ್, 2014ರಲ್ಲಿ ಹಾಸನ ಪ್ರಭ ದಿನಪತ್ರಿಕೆಯ ಮೂಲಕ ವೃತ್ತಿ ಆರಂಭಿಸಿದ್ದು, 2015ರಿಂದ ಸುವರ್ಣ ಟೈಮ್ಸ್ ಆಫ್ ಕರ್ನಾಟಕ ದಿನಪತ್ರಿಕೆಯ ಚನ್ನರಾಯಪಟ್ಟಣ ತಾಲೂಕು ವರದಿಗಾರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಲ್ಲದೆ, 2021ರಿಂದ ನಮ್ಮ ಹಾಸನ ಟಿವಿ ನ್ಯೂಸ್ ದೃಶ್ಯ ಮಾಧ್ಯಮದಲ್ಲಿಯೂ ತಾಲೂಕು ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಮಾಧ್ಯಮ ಕ್ಷೇತ್ರದ ನಿರಂತರ ಸೇವೆ ಹಾಗೂ ಸಾಧನೆಯನ್ನು ಪರಿಗಣಿಸಿ 71ನೇ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಾಸಕ ಸಿ.ಎನ್. ಬಾಲಕೃಷ್ಣ, ತಹಸೀಲ್ದಾರ್ ಜೆ.ಎಸ್. ಶಂಕರಪ್ಪ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜೆ.ಆರ್. ಹರೀಶ್, ಬಿಇಒ ಸತೀಶ್, ಪುರಸಭೆ ಮುಖ್ಯಾಧಿಕಾರಿ ಪ್ರಕಾಶ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಎಚ್. ಎನ್. ಲೋಕೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಸಮಸ್ತ ಶತಮಾನೋತ್ಸವ ಅಂಗವಾಗಿ ಹಿಜಾಮಾ ಚಿಕಿತ್ಸಾ ಶಿಬಿರ



ಪ್ರಜಾ ಭಾರತ ವರದಿ

ಸಕಲೇಶಪುರ: ಸಮಸ್ತದ ನೂರನೇ ವಾರ್ಷಿಕೋತ್ಸವದ ಅಂಗವಾಗಿ ಕರ್ನಾಟಕ ರಾಜ್ಯ ಎಸ್‌ವೈಎಸ್ ವತಿಯಿಂದ ಪಟ್ಟಣದ ಪುರಭವನದಲ್ಲಿ ಹಿಜಾಮಾ ಚಿಕಿತ್ಸಾ ಶಿಬಿರ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಅಬ್ಬು ಮುಸ್ಲಿಯಾರ್, ಎಸ್‌ವೈ-ಎಸ್ ಸಂಘಟನೆಯು ಧಾರ್ಮಿಕ ಚಟುವಟಿಕೆಗಳ ಜೊತೆಗೆ ಸಾಮಾಜಿಕ ಸೇವೆ, ಬಡವರಿಗೆ ನೆರವು ಹಾಗೂ ಸಾಂತ್ವನ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ. ಸಮಸ್ತದ ಶತಮಾನೋತ್ಸವದ ಅಂಗವಾಗಿ ರಾಜ್ಯದ ವಿವಿಧೆಡೆ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಅದರ ಭಾಗವಾಗಿ ಸಕಲೇಶಪುರದಲ್ಲಿ ಶಿಬಿರ ಆಯೋಜಿಸಲಾಗಿದೆ ಎಂದರು.

ಯೋಜನಾ ಪ್ರಾಧಿಕಾರದ ತಾಲೂಕು ಅಧ್ಯಕ್ಷ ಸೈಯದ್ ಮುಫೀಜ್ ಮಾತನಾಡಿ, ಹಿಜಾಮಾ ಚಿಕಿತ್ಸೆಯು ಇಸ್ಲಾಮಿಕ್ ಪರಂಪರೆಯಲ್ಲಿ ಹಿಂದಿನಿಂದಲೂ ಆಚ ರಣೆಯಲ್ಲಿರುವ ಸಾಂಪ್ರದಾಯಿಕ ಚಿಕಿತ್ಸಾ ಪದ್ಧತಿಯಾಗಿದ್ದು, ವೆಟ್ ಕಪ್ಪಿಂಗ್ ವಿಧಾನದಲ್ಲಿ ದೇಹದಿಂದ ಅಲ್ಪ ಪ್ರಮಾಣದ ರಕ್ತವನ್ನು ಹೊರತೆಗೆಯಲಾಗುತ್ತದೆ. ಈ ಚಿಕಿತ್ಸಾ ವಿಧಾನದ ಕುರಿತು ಜನರಲ್ಲಿ ಅರಿವು ಮೂಡಿಸುವುದು ಶಿಬಿರದ ಉದ್ದೇಶವಾಗಿದೆ ಎಂದರು.

ಶಿಬಿರದಲ್ಲಿ 200ಕ್ಕೂ ಹೆಚ್ಚು ಮಂದಿ ನೋಂದಾಯಿಸಿಕೊಂಡು ಚಿಕಿತ್ಸೆ ಪಡೆದರು.

ಈ ಸಂದರ್ಭದಲ್ಲಿ ಶಾಫಿ ನೈಮಿ, ಹಾಸನ ಜಿಲ್ಲಾ ಉಪಖಾಜಿ ಸಯ್ಯದ್ ಅಲವಿ, ಪುರಸಭೆ ಮಾಜಿ ಅಧ್ಯಕ್ಷ ಯಾದಗರಿ ಇಬ್ರಾಹಿಂ, ಆನೆಮಹಲ್ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಆನೆಮಹಲ್ ಹಸೈನಾರ್, ದೇಕ್ಲಾ ಮಸೀದಿ ಅಧ್ಯಕ್ಷ ಸುಲೇಮಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ವೀಲ್‌ಚೇರ್‌ನಲ್ಲೇ ಹಾಸನಾಂಬೆ ದರ್ಶನ ಪಡೆದ ವಿದ್ಯಾ

ಪ್ರಜಾ ಭಾರತ ವರದಿ

ಹಾಸನ: ದೈಹಿಕ ಸವಾಲುಗಳ ನಡುವೆಯೂ ಭಕ್ತಿಗೆ ಅಡ್ಡಿಯಾಗದು ಎಂಬುದನ್ನು ಬೇಲೂರು ತಾಲ್ಲೂಕಿನ ಮತಿಘಟ್ಟ ಗ್ರಾಮದ 36 ವರ್ಷದ ವಿದ್ಯಾ ಸಾಬೀತುಪಡಿಸಿದ್ದಾರೆ.

ವೀಲ್‌ಚೇರ್‌ನಲ್ಲಿ ಹಾಸನಾಂಬೆ ದೇವಾಲಯಕ್ಕೆ ಆಗಮಿಸಿದ ವಿದ್ಯಾ, ಇದೇ ಮೊದಲ ಬಾರಿಗೆ ಶ್ರೀ ಹಾಸನಾಂಬೆ ತಾಯಿಯ ದರ್ಶನ ಪಡೆದು ತಮ್ಮ ಬಹುದಿನಗಳ ಕನಸನ್ನು ನನಸು ಮಾಡಿಕೊಂಡರು.

ದೇವಾಲಯದ ಆಡಳಿತ ಮಂಡಳಿ ಕಲ್ಪಿಸಿದ್ದ ವಿಶೇಷ ಸರತಿ ಸಾಲಿನ ವ್ಯವಸ್ಥೆಯ ಮೂಲಕ ಸುಲಭವಾಗಿ ಗರ್ಭಗುಡಿ ತಲುಪಿ ದರ್ಶನ ಪಡೆದರು. ಬಳಿಕ ಭಾವುಕರಾದ ಅವರು, ಈ ಕ್ಷಣ ಜೀವನದಲ್ಲಿ ಮರೆಯಲಾಗದ ಅನುಭವ ಎಂದು ಸಂತಸ ವ್ಯಕ್ತಪಡಿಸಿದರು.

ವಿದ್ಯಾ ಅವರ ಅಚಲ ಭಕ್ತಿ ಹಾಗೂ ಶ್ರದ್ಧೆ ಜಾತ್ರೆಗೆ ಆಗಮಿಸಿದ್ದ ಭಕ್ತರ ಗಮನ ಸೆಳೆದು, ಅನೇಕರಿಗೆ ಪ್ರೇರಣೆಯಾಯಿತು.

ರೇಷನ್ ಕಾರ್ಡ್ ಇ-ಕೈವೈಸಿ: ಇನ್ನು ದಿನಾಂಕ ವಿಸ್ತರಣೆ ಇಲ್ಲ; 41 ಲಕ್ಷ ಜನರಿಗೆ ಆಹಾರ ಇಲಾಖೆಯ ಖಡಕ್ ಸೂಚನೆ! ರದ್ದು?

ರಾಜ್ಯದಲ್ಲಿ ಪಡಿತರ ಚೀಟಿ ಇ-ಕೈವೈಸಿ ಮಾಡಿಸಲು ನವೆಂಬರ್ 10 ಅಂತಿಮ ದಿನವಾಗಿದ್ದು, ಇನ್ನು ಯಾವುದೇ ಕಾರಣಕ್ಕೂ ದಿನಾಂಕ ವಿಸ್ತರಿಸುವುದಿಲ್ಲ ಎಂದು ಆಹಾರ ಇಲಾಖೆ ಸ್ಪಷ್ಟಪಡಿಸಿದೆ. ರಾಜ್ಯದಲ್ಲಿ ಇನ್ನೂ 41.33 ಲಕ್ಷ ಜನರ ಇ-ಕೈವೈಸಿ ಬಾಕಿ ಉಳಿದಿದೆ. ಪಡಿತರ ಕಡಿತ ತಪ್ಪಿಸಲು ಸಾರ್ವಜನಿಕರು 'ಅನ್ನ ಸೇವೆ' ಮೊಬೈಲ್ ಆಪ್ ಮೂಲಕ ಅಥವಾ ಸಮೀಪದ ನ್ಯಾಯಬೆಲೆ ಅಂಗಡಿಗಳಲ್ಲಿ ನವೆಂಬರ್ 10ರೊಳಗೆ ಕಡ್ಡಾಯವಾಗಿ ಇ-ಕೈವೈಸಿ ಪೂರ್ಣಗೊಳಿಸಬೇಕಾಗಿದೆ.

ಬೇಲೂರಿನ ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ಘನ ನ್ಯಾಯಾಲಯದಲ್ಲಿ
ಸಿ.ಮಿಸ್.ನಂ. 680/2026

ಅರ್ಜಿದಾರರು : 1) ಯೋಗೇಶ್ ಎಂ.ಎ. ಬಿನ್ ಲೇಟ್ ಅಣ್ಣಪ್ಪ, 32 ವರ್ಷ, ನೆಹರು ನಗರ, ಬೇಲೂರು ಟೌನ್, ಬೇಲೂರು ತಾಲೂಕು, ಹಾಸನ ಜಿಲ್ಲೆ. ಹಾಲಿ ವಾಸ: ಮುಗಳಿಹಳ್ಳಿ ಗ್ರಾಮ,ಬಿಕ್ಕೋಡು ಹೋಬಳಿ, ಬೇಲೂರು ತಾಲೂಕು, ಹಾಸನ ಜಿಲ್ಲೆ.

ಸಾರ್ವಜನಿಕ ತಿಳುವಳಿಕೆ

ಅರ್ಜಿದಾರರ ಅಜ್ಜನಾದ ಸಣ್ಣಬೀರಯ್ಯ ಬಿನ್ ಚಿಕ್ಕಯ್ಯರವರು ಹಾಸನ ಜಿಲ್ಲೆ, ಬೇಲೂರು ತಾಲೂಕು, ಬೇಲೂರು ಟೌನ್, ನೆಹರು ನಗರ, ಬೇಲೂರಿನ ಅರ್ಜಿದಾರರ ಮನೆಯಲ್ಲಿ ದಿನಾಂಕ: 20.05.1980 ರಂದು ಮರಣ ಹೊಂದಿರುತ್ತಾರೆ. ಅವರ ಹಿರಿಯರ ಹೆಸರಿನಲ್ಲಿರುವ ಆಸ್ತಿಗಳ ಖಾತಾ ಬದಲಾವಣೆಗಾಗಿ ಅವರ ಮರಣ ದೃಢೀಕರಣ ಪತ್ರ ಪಡೆಯಲು ಮೇಲ್ಕಂಡ ಅರ್ಜಿಯನ್ನು ಬೇಲೂರಿನ ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ಘನ ನ್ಯಾಯಾಲಯದಲ್ಲಿ ದಾಖಲು ಮಾಡಿರುತ್ತಾರೆ. ಸದರಿ ಆಸ್ತಿಗೆ ಬೇರೆ ಯಾರಾದರೂ ಹಿತಾಸಕ್ತಿಯುಳ್ಳವರು ಇದ್ದಲ್ಲಿ ಬೇಲೂರಿನ ಜೆ.ಎಂ.ಎಫ್.ಸಿ. ರವರ ಘನ ನ್ಯಾಯಾಲಯಕ್ಕೆ ದಿನಾಂಕ: 05.10.2026 ರಂದು ವೈಯಕ್ತಿಕವಾಗಿ ಅಥವಾ ನ್ಯಾಯವಾದಿಗಳ ಮುಖಾಂತರವಾಗಲೀ ಬೆಳಿಗ್ಗೆ 11 ಗಂಟೆಗೆ ಹಾಜರಾಗುವುದು. ತಪ್ಪಿದಲ್ಲಿ ಬೇರೆ ಯಾರೂ ವಾರಸುದಾರರು ಹಿತಾಸಕ್ತಿಯುಳ್ಳವರು ಇರುವುದಿಲ್ಲವೆಂದು ಪರಿಗಣಿಸಿ ತೀರ್ಪನ್ನು ನೀಡಲಿದ್ದಾರೆ.

ದಿನಾಂಕ: 14.08.2026 ರಂದು ಈ ನ್ಯಾಯಾಲಯದ ಮೊಹರು ಮತ್ತು ನನ್ನ ಸಹಿಯೊಡನೆ ಕೊಡಲ್ಪಟ್ಟಿದೆ.

ಅರ್ಜಿದಾರರ ಪರ ವಕೀಲರು
(ಎಂ.ಆರ್.ಜಯಣ್ಣ
ಸ್ಥಳ: ಬೇಲೂರು

ನ್ಯಾಯಾಲಯದ ಆದೇಶದ ಮೇರೆಗೆ
ಆಡಳಿತ ಶಿರಸ್ತೇದಾರರು
ಬೇಲೂರು ಪ್ರಧಾನ ಸಿವಿಲ್ ಜಡ್ಜ್ ಮತ್ತು
ಜೆಎಂಎಫ್‌ಸಿ ನ್ಯಾಯಾಲಯ

ಕಡೇಗರ್ಜೆ ಸರ್ಕಾರಿ ಶಾಲೆಗೆ ಡ್ರಮ್ ಸೆಟ್ ಕೊಡುಗೆ



ಪ್ರಜಾ ಭಾರತ ವರದಿ

ಅರೇಹಳ್ಳಿ: ಬೇಲೂರು ತಾಲೂಕು ಅರೇಹಳ್ಳಿ ಹೋಬಳಿ ವ್ಯಾಪ್ತಿಯ ಕಡೇಗರ್ಜೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 71ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಲಯನ್ಸ್ ಸದಸ್ಯ ಲೋಕೇಶ್ ಹಾಗೂ ಇತರ ಸದಸ್ಯರು ಡ್ರಮ್ ಸೆಟ್ ಕೊಡುಗೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಆಸಕ್ತಿ ಬೆಳೆಸುವ ಹಾಗೂ ಶಾಲೆಯ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಕೊಡುಗೆ ನೀಡಲಾಗಿದ್ದು, ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಸಂತಸಕ್ಕೆ ಕಾರಣವಾಯಿತು.

ಶಾಲೆಗೆ ಅಗತ್ಯವಾದ ಡ್ರಮ್ ಸೆಟ್ ಒದಗಿಸಿಕೊಟ್ಟ ಲಯನ್ಸ್ ಸದಸ್ಯರಿಗೆ ಶಿಕ್ಷಕರು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಲಯನ್ಸ್ ಅಧ್ಯಕ್ಷ ಲ. ಸತೀಶ್ ಪೂಜಾರಿ, ಕಾರ್ಯದರ್ಶಿ ಲ. ಸೌಜನ್ಯ, ಖಜಾಂಚಿ ಲ. ಗುರುಪ್ರಸಾದ್, ಲ. ಲೋಕೇಶ್, ಲ. ಬ್ರೈಂದನ್, ಲ. ಚಾಮರಾಜ್, ಲ. ಸಂತೋಷ್, ಲ. ಸಂತೋಷ್ ಕೆ.ಎಸ್., ಲ. ಕಾಂತರಾಜು ಸೇ-ರಿದಂತೆ ಇತರರು ಉಪಸ್ಥಿತರಿದ್ದರು.

ಜನ್ಮದಿನದ ಸಂಭ್ರಮಕ್ಕೆ ಮಾನವೀಯತೆಯ ಮೆರುಗು : ನಾಲ್ಕು ದಿನ ಸೇವಾಯಜ್ಞ

ರಕ್ತದಾನ, ವೃದ್ಧಾಶ್ರಮದಲ್ಲಿ ಅನ್ನದಾನ, ವಿಶೇಷ ಮಕ್ಕಳೊಂದಿಗೆ ಸಂಭ್ರಮ

ಪ್ರಜಾ ಭಾರತ ವರದಿ

ಹಾಸನ: ಹುಟ್ಟುಹಬ್ಬವನ್ನು ಕೇವಲ ಕೇಕ್ ಕತ್ತರಿಸಿ ಸಂಭ್ರಮಿಸುವುದಕ್ಕೆ ಸೀಮಿತಗೊಳಿಸದೆ, ಸಮಾಜಮುಖಿ ಕಾರ್ಯಗಳ ಮೂಲಕ ಅರ್ಥ ಪೂರ್ಣವಾಗಿ ಆಚರಿಸಿಕೊಳ್ಳುವ ಮೂಲಕ ಜನನಿ ಫೌಂಡೇಶನ್ ಸಂಸ್ಥಾಪಕಿ ಹಾಗೂ ಅಧ್ಯಕ್ಷೆ ಭಾನುಮತಿ ಇತರರಿಗೆ ಮಾದರಿಯಾಗಿದ್ದಾರೆ.



ತಮ್ಮ 50ನೇ ವರ್ಷದ ಜನ್ಮದಿನದ ಅಂಗವಾಗಿ ನಾಲ್ಕು ದಿನಗಳ ಕಾಲ ನಾಲ್ಕು ವಿಭಿನ್ನ ಸಮಾಜಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಾನವೀಯತೆ ಹಾಗೂ ಸಾಮಾಜಿಕ ಕಳಕಳಿ ಮೆರೆದಿದ್ದಾರೆ.

ಮೊದಲ ದಿನ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ಸೇವಾ ಕಾರ್ಯಕ್ಕೆ ಚಾಲನೆ ನೀಡಿದ ಅವರು, ಎರಡನೇ ದಿನ ಹಾಸನದ ಕಾಮಧೇನು ವೃದ್ಧಾಶ್ರಮಕ್ಕೆ ಭೇಟಿ ನೀಡಿ ವೃದ್ಧ-ರಿಗೆ ಅನ್ನದಾನ ಮಾಡಿ ಅವರೊಂದಿಗೆ ಸಮಯ ಕಳೆಯುವ ಮೂಲಕ ಸಂತಸ ಹಂಚಿಕೊಂಡರು.

ಮೂರನೇ ದಿನ ನಗರದ ಕೃಷ್ಣ ಅಂಧ ಮಕ್ಕಳ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ಸಿಹಿತಿಂಡಿ ಹಾಗೂ ಉಡುಗೊರೆ ವಿತರಿಸಿ, ಅವರೊಂದಿಗೆ ಕೇಕ್ ಕತ್ತರಿಸಿ ಜನ್ಮದಿನ ಆಚರಿಸಿಕೊಂಡರು.

ನಾಲ್ಕನೇ ದಿನ ತಮ್ಮ ತಂದೆ ಹಾಗೂ ಜೀವನಕ್ಕೆ ಮಾರ್ಗದರ್ಶನ ನೀಡಿದ ಗುರುಹಿರಿಯರನ್ನು ಸನ್ಮಾನಿಸಿ ಗೌರವಿಸುವ ಮೂಲಕ ಕೃತಜ್ಞತೆ ಸಲ್ಲಿಸಿದರು.ಸಮಾಜಸೇವೆ, ಪರಿಸರ ಸಂರಕ್ಷಣೆ, ಕ್ರೀಡೆ, ವಿಜ್ಞಾನ, ಕಲೆ, ಸಾಹಿತ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಯೋಗ ಕ್ಷೇತ್ರಗಳಲ್ಲಿ ಹಲವು ವರ್ಷಗಳಿಂದ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಭಾನುಮತಿ ಅವರು ಈಗಾಗಲೇ 12 ಬಾರಿ ರಕ್ತದಾನ ಮಾಡಿದ್ದು, ನೇತ್ರದಾನಕ್ಕೂ ಸಂಕಲ್ಪ ಮಾಡಿದ್ದಾರೆ.

ಕುಟುಂಬದ ಸದಸ್ಯರು, ಬಂಧುಗಳು ಹಾಗೂ ಸ್ನೇಹಿತರ ಸಮ್ಮುಖದಲ್ಲಿ ನಡೆದ ಈ ಆಚರಣೆ ಕೇವಲ ಜನ್ಮದಿನದ ಸಂಭ್ರಮವಾಗದೆ, ಸಮಾಜಕ್ಕೆ ಸೇವೆಯ ಸಂದೇಶ ಸಾರಿತು. ಇಂತಹ ಸಮಾಜಮುಖಿ ಕಾರ್ಯಗಳ ಮೂಲಕ ಜನ್ಮದಿನ ಆಚ-ರಿಸಿಕೊಂಡಿರುವುದು ಅಪಾರ ಆತ್ಮತೃಪ್ತಿ ಮತ್ತು ನೆಮ್ಮದಿ ನೀಡಿದೆ. ಸಮಾಜ-ಕ್ಕೆ ಸಾಧ್ಯವಾದಷ್ಟು ಕೊಡುಗೆ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇನೆ ಎಂದು ಭಾನುಮತಿ ಸಂತಸ ವ್ಯಕ್ತಪಡಿಸಿದರು.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G